# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1119 |
| 2. | ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭಾ ಕ್ಷೇತ್ರ) |
| 3. | ಉತ್ತರಿಸುವ ದಿನಾಂಕ | : | 12.03.2026 |
| 4. | ಉತ್ತರಿಸುವ ಸಚಿವರು | : | ಗೃಹ ಸಚಿವರು. |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಕಳೆದ ಒಂದು ತಿಂಗಳ ಅವಧಿಯಲ್ಲಿ ಬೆಂಗಳೂರು ನಗರದಲ್ಲಿ ಪೊಲೀಸರು ನಡೆಸಿರುವ ವಿಶೇಷ ಕಾರ್ಯಾಚರಣೆಯಲ್ಲಿ ಎಷ್ಟು ಜನ ಡ್ರಗ್ಸ್ ವ್ಯಸನಿಗಳನ್ನು ಗುರುತಿಸಲಾಗಿದೆ ಮತ್ತು ಎಷ್ಟು ಜನ ಮಾದಕ ವಸ್ತು ಮಾರಾಟಗಾರರನ್ನು (Peddlers) ಬಂಧಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು);</td><td>ಕಳೆದ ಒಂದು ತಿಂಗಳ ಅವಧಿಯಲ್ಲಿ ಬೆಂಗಳೂರು ನಗರದಲ್ಲಿ ಪೊಲೀಸರು ನಡೆಸಿರುವ ವಿಶೇಷ ಕಾರ್ಯಾಚರಣೆಯಲ್ಲಿ ಬಂಧಿಸಲಾಗಿರುವ ಡ್ರಗ್ಸ್ ವ್ಯಸನಿಗಳು ಮತ್ತು ಮಾದಕ ವಸ್ತು ಮಾರಾಟಗಾರರ (Peddlers) ಮಾಹಿತಿಯನ್ನು ಈ ಕೆಳಕಂಡಂತೆ ನೀಡಲಾಗಿದೆ:-
<table>
<tr><th>ಕ್ರ.ಸಂ</th><th>ವರ್ಷ</th><th>ಎನ್.ಡಿ.ಪಿ.ಎಸ್ ಕಾಯ್ದೆ-1985 ರಡಿಯಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ</th><th>ಎನ್.ಡಿ.ಪಿ.ಎಸ್ ಕಾಯ್ದೆ-1985 ರಡಿಯಲ್ಲಿ ಬಂದಿಸಲಾದ ವ್ಯಸನಿಗಳ ಸಂಖ್ಯೆ</th><th>ಎನ್.ಡಿ.ಪಿ.ಎಸ್ ಕಾಯ್ದೆಯಡಿಯಲ್ಲಿ ಬಂದಿಸಲಾದ ಮಾರಾಟಗಾರರ ಸಂಖ್ಯೆ</th></tr>
<tr><td>1</td><td>ಜನವರಿ-2026</td><td>842</td><td>963</td><td>163</td></tr>
<tr><td>2</td><td>ಫೆಬ್ರವರಿ-2026</td><td>440</td><td>500</td><td>109</td></tr>
<tr><td colspan="2">ಒಟ್ಟು</td><td>1282</td><td>1463</td><td>272</td></tr>
</table></td></tr>
<tr><td>(ಆ)</td><td>ಈ ಜಾಲದಲ್ಲಿ ವಿದ್ಯಾರ್ಥಿಗಳು ಹಾಗೂ ಐಟಿ-ಬಿಟಿ ಉದ್ಯೋಗಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶಾಲಾ-ಕಾಲೇಜುಗಳ ಸುತ್ತಮುತ್ತ ಮಾದಕ ವಸ್ತು ಮಾರಾಟ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td><td>ಗಮನಕ್ಕೆ ಬಂದಿರುತ್ತದೆ.<br><br>ಶಾಲಾ-ಕಾಲೇಜುಗಳ ಸುತ್ತಮುತ್ತ ಮಾದಕ ವಸ್ತು ಮಾರಾಟ ತಡೆಯಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:-<br>➢ ಶಾಲಾ-ಕಾಲೇಜುಗಳ ವ್ಯಾಪ್ತಿಯಲ್ಲಿ ನಿಯಮಿತ ಪೊಲೀಸ್ ಪೆಟ್ರೋಲಿಂಗ್ ನಡೆಸಲಾಗುತ್ತಿದೆ.<br>➢ ಪೊಲೀಸ್ ಮಾರ್ಷಲ್ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿದೆ.<br>➢ ಸಂಶಯಾಸ್ಪದ ಅಂಗಡಿಗಳು, ಪಾನ್ ಶಾಪ್‌ಗಳು ಮತ್ತು ಟೀ ಸ್ಟಾಲ್‌ಗಳ ತಪಾಸಣೆ ಮಾಡಲಾಗುತ್ತಿದೆ.<br>➢ ಶಾಲಾ ಆಡಳಿತದೊಂದಿಗೆ ಸಮನ್ವಯ ಸಭೆಗಳು ನಡೆಸುತ್ತಿದ್ದು, ಪ್ರತಿ ತಿಂಗಳ ಕೊನೆಯ ದಿನ ಶಾಲಾ-ಕಾಲೇಜುಗಳಲ್ಲಿ ಮಾದಕ ವಸ್ತುಗಳ ದುಷ್ಪರಿಣಾಮ ಹಾಗೂ ಕಾನೂನು ಪರಿಣಾಮಗಳ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ.<br>➢ ಬೀಟ್ ಪೊಲೀಸ್ ಮೂಲಕ ಗುಪ್ತ ಮಾಹಿತಿ ಸಂಗ್ರಹಣೆ (Intelligence collection).<br>➢ ವಿಶೇಷ ದಾಳಿ (Special Drives) ಮತ್ತು Area Domination ಮೂಲಕ ನಿರಂತರ ತಡೆ ಕ್ರಮಗಳನ್ನು ಅನುಸರಿಸಲಾಗುತ್ತಿದೆ.</td></tr>
</table>

| | | |
|---|---|---|
| (ಇ) | ವರದಿಯಾಗಿರುವಂತೆ ಸುಮಾರು 10 ಕೋಟಿ ರೂಪಾಯಿ ಬೆಲೆ ಬಾಳುವ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಇಷ್ಟು ದೊಡ್ಡ ಮಟ್ಟದ ಜಾಲದ ಮೂಲವನ್ನು (Source) ಪತ್ತೆ ಹಚ್ಚಲು ಸರ್ಕಾರಕ್ಕೆ ಸಾಧ್ಯವಾಗಿದೆಯೇ; | ಬೆಂಗಳೂರು ನಗರದ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ 2026 ನೇ ಸಾಲಿನಲ್ಲಿ ಮಾದಕ ವಸ್ತು ಮಾರಾಟಗಾರರ ವಿರುದ್ಧ ಒಟ್ಟು 160 ಪ್ರಕರಣಗಳನ್ನು ದಾಖಲಿಸಿ, 272 ಜನ ಆರೋಪಿಗಳನ್ನು ದಸ್ತಗಿರಿ ಮಾಡಲಾಗಿದ್ದು, ಒಟ್ಟು ಸುಮಾರು 30.87 ಕೋಟಿ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿರುತ್ತದೆ. |
| (ಈ) | ಮಾದಕ ವ್ಯಸನಕ್ಕೆ ತುತ್ತಾದವರ ಪುನರ್ವಸತಿಗಾಗಿ ಮತ್ತು ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸಲು ಗೃಹ ಇಲಾಖೆಯು ಶಿಕ್ಷಣ ಮತ್ತು ಆರೋಗ್ಯ ಇಲಾಖೆಯೊಂದಿಗೆ ಸೇರಿ ರೂಪಿಸಿರುವ ವಿಶೇಷ ಕಾರ್ಯಯೋಜನೆಗಳು ಯಾವುವು? | ➢ ದಿನಾಂಕ: 26.06.2025 ರಂದು "International Day against Drug Abuse & illicit Trafficking" ದಿನಾಚರಣೆಯ ಸಂಬಂಧ ಎಲ್ಲಾ ಪೊಲೀಸ್ ಠಾಣಾ ವ್ಯಾಪ್ತಿಯ ಗರಿಷ್ಠ ಶೈಕ್ಷಣಿಕ ಸಂಸ್ಥೆಗಳಿಗೆ ಭೇಟಿ ನೀಡಿ, ಮಾದಕ ವಸ್ತುಗಳ ಬಳಕೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಸಾಕ್ಷ್ಯಚಿತ್ರ, ಬಿತ್ತಿ ಪತ್ರಗಳ ಮುಖಾಂತರ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಿರುತ್ತದೆ.<br>➢ ಶಾಲಾ ಕಾಲೇಜುಗಳಿಗೆ ಇಲಾಖೆಯ ಹಿರಿಯ ಅಧಿಕಾರಿಗಳು ಮತ್ತು ಸಂಪನ್ಮೂಲ ವ್ಯಕ್ತಿಗಳಿಂದ ಮಾದಕ ವಸ್ತುಗಳ ಬಳಕೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಅಗತ್ಯ ಮಾಹಿತಿ ನೀಡಲಾಗಿರುತ್ತದೆ.<br>➢ NO Drug ಅಭಿಯಾನದ ಮುಖಾಂತರ ಸಾವಿರಾರು ವಿದ್ಯಾರ್ಥಿಗಳಿಗೆ ಪ್ರಮಾಣ ವಚನ ಬೋಧನೆ ಮಾಡಿ, ಪ್ರಮಾಣ ಪತ್ರಗಳನ್ನು ನೀಡಲಾಗಿರುತ್ತದೆ.<br>➢ Drug Free Karnataka App ಅನ್ನು ಬಳಸಿ ಸಾರ್ವಜನಿಕರು ಬಳಸುವಂತೆ ಮತ್ತು ಆಪ್ ಮುಖಾಂತರ ತಮಗೆ ಮಾದಕ ವಸ್ತು ಕಳ್ಳಸಾಗಾಣಿಕೆ, ಸೇವನೆ, ಸಂಗ್ರಹ ತಯಾರಿಕೆ ಇತ್ಯಾದಿಗಳ ಬಗ್ಗೆ ಮಾಹಿತಿ ದೊರೆತಲ್ಲಿ ನೀಡುವಂತೆ ಮನವಿ ಮಾಡಿ ಆಪ್ ಬಳಕೆಯ ಬಗ್ಗೆ ಸೂಕ್ತ ತಿಳುವಳಿಕೆ ನೀಡಿರುತ್ತದೆ. ಮಾಹಿತಿಯ ಗೌಪ್ಯತೆಯ ಬಗ್ಗೆಯು ಸಹ ಸಾರ್ವಜನಿಕರಿಗೆ ಮನವರಿಕೆ ಮಾಡಿಕೊಟ್ಟಿರುತ್ತದೆ. Drug Free Bengaluru ಮಾಡಲು ಸಾರ್ವಜನಿಕರ ಸಹಕಾರವನ್ನು ಕೋರಲಾಗಿದೆ. |

ಒಇ 22 ಪಿಎನ್‌ಡಿ 2026 (ಇ)

(ಡಾ: ಜಿ . ಪರಮೇಶ್ವರ)
ಗೃಹ ಸಚಿವರು